ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1535
2. ಸದಸ್ಯರ ಹೆಸರು : ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು)
3. ಉತ್ತರಿಸುವ ದಿನಾಂಕ : 18-03-2021
4. ಉತ್ತರಿಸುವವರು : ಮುಖ್ಯಮಂತ್ರಿಗಳು

ಕ್ರ.ಸಂ	ಪ್ರಶ್ನೆ	ಉತ್ತರ
ಅ	ಬೆಂಗಳೂರು ನಗರದ ರಿಂಗ್ ರಸ್ತೆಯ ಹೊಸಕೆರೆಹಳ್ಳಿ ಪಿ.ಇ.ಎಸ್ ಯುನಿವರ್ಸಿಟಿ ಜಂಕ್ಷನ್‌ನಿಂದ ನಾಯಂಡಹಳ್ಳಿಗೆ ಹೋಗುವ ರಸ್ತೆಯ ಇಕ್ಕೆಲಗಳಲ್ಲಿರುವ ಸರ್ವೀಸ್ ರಸ್ತೆಯೂ ಸಾರ್ವಜನಿಕರ ಉಪಯೋಗಕ್ಕೆ ಬಾರದೆ ಖಾಸಗಿಯವರ ಅನ್ಯ ಚಟುವಟಿಕೆಗಳಿಗೆ ಬಳಕೆ ಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)	ಬೆಂಗಳೂರು ನಗರದ ರಿಂಗ್ ರಸ್ತೆಯ ಹೊಸಕೆರೆಹಳ್ಳಿ ಪಿ.ಇ.ಎಸ್ ಯುನಿವರ್ಸಿಟಿ ಜಂಕ್ಷನ್‌ನಿಂದ ನಾಯಂಡಹಳ್ಳಿಗೆ ಹೋಗುವ ಮುಖ್ಯರಸ್ತೆಯ ಪಕ್ಕದಲ್ಲಿನ ಸರ್ವೀಸ್ ರಸ್ತೆಯನ್ನು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ರಸ್ತೆ ಕತ್ತರಿಸಿದ ಹಿನ್ನಲೆಯಲ್ಲಿ ಸದರಿ ಸರ್ವೀಸ್ ರಸ್ತೆಯಲ್ಲಿ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗಿದ್ದು, ಈ ಕಾರಣದಿಂದ ಸದರಿ ಸರ್ವೀಸ್ ರಸ್ತೆಯಲ್ಲಿ ವಾಹನಗಳು ಚಲಿಸದ ಕಾರಣದಿಂದ ಕೆಲವು ಸಾರ್ವಜನಿಕರು ಈ ಸರ್ವೀಸ್ ರಸ್ತೆಯಲ್ಲಿ ಅನುಪಯುಕ್ತ ವಸ್ತುಗಳನ್ನು (ಡೆಬ್ರಿಸ್) ಹಾಕುತ್ತಿದ್ದು ಮತ್ತು ಇದೇ ಸಂದರ್ಭದ ಅವಕಾಶವನ್ನು ಕೆಲವು ಖಾಸಗಿ ವ್ಯಕ್ತಿ / ಸಂಸ್ಥೆಗಳು ಉಪಯೋಗಿಸಿಕೊಂಡು ಈ ಸರ್ವೀಸ್ ರಸ್ತೆಯಲ್ಲಿ ಹೆಚ್ಚಾಗಿ ವಾಹನ ರಿಪೇರಿ ಮಾಡುವುದು, ಮರಳು ಮಾರಾಟ / ಕಟ್ಟಡ ಸಾಮಗ್ರಿ ಲಾರಿಗಳನ್ನು ತಾತ್ಕಾಲಿಕವಾಗಿ ನಿಲ್ಲಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಪ್ರಸ್ತುತ, ಸದರಿ ಸರ್ವೀಸ್ ರಸ್ತೆಯನ್ನು ದುರಸ್ಥಿಪಡಿಸಿ ಮರು ಡಾಂಬರೀಕರಣ ಕೈಗೊಂಡಿದ್ದು, ಸೇವಾ ರಸ್ತೆಯನ್ನು ಸಾರ್ವಜನಿಕರ ವಾಹನ ಸಂಚಾರಕ್ಕೆ ಮುಕ್ತಗೊಳಿಸಲಾಗಿರುತ್ತದೆ ಮತ್ತು ಖಾಸಗಿಯವರ ಅನ್ಯ ಚಟುವಟಿಕೆಗಳಿಗೆ / ಬಳಕೆಗೆ ಕಡಿವಾಣ ಹಾಕಲಾಗಿರುತ್ತದೆ.

ಆ	ಬೆಂಗಳೂರು ನಗರದ ಯಾವ ಯಾವ ಬಡಾವಣೆಗಳಲ್ಲಿರುವ ರಸ್ತೆಗಳು ಸಾರ್ವಜನಿಕರ ಉಪಯೋಗಕ್ಕೆ ಬಾರದೆ ಖಾಸಗಿಯವರ ಅನ್ಯ ಚಟುವಟಿಕೆಗಳಿಗೆ ಬಳಕೆಯಾಗುತ್ತಿವೆ; ಇಂತಹ ರಸ್ತೆಗಳ ಸಂಖ್ಯೆ ಎಷ್ಟು; ಇವುಗಳನ್ನು ತೆರವುಗೊಳಿಸಿ ಸಾರ್ವಜನಿಕರ ಉಪಯೋಗಕ್ಕೆ ಮುಕ್ತಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಆರ್ಟೀರಿಯಲ್ ಮತ್ತು ಸಬ್-ಆರ್ಟೀರಿಯಲ್ ರಸ್ತೆಗಳನ್ನು ಸಾರ್ವಜನಿಕರು ತಮ್ಮ ವಾಹನ ಸಂಚಾರಕ್ಕೆ ಉಪಯೋಗಿಸುತ್ತಿದ್ದು, ಸದರಿ ರಸ್ತೆಗಳು ಯಾವುದೇ ಖಾಸಗಿಯವರ ಅನ್ಯ ಚಟುವಟಿಕೆಗಳಿಗೆ ಬಳಕೆಯಾಗದಂತೆ ಕ್ರಮ ವಹಿಸಲಾಗುತ್ತಿದೆ.

ಸಂಖ್ಯೆ: ನಅಇ 74 ಎಂಎನ್‌ವೈ 2021 (ಇ)

(ಬಿ.ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ